# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 581 (727) |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಲ್ಕ್‌ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ಬಳಿಕ ಅಲ್ಲಿ ರಸ್ತೆ ಸಿಗ್ನಲ್ ಅಳವಡಿಸದಿರಲು ಕಾರಣವೇನು ; | ➤ ಬೊಮ್ಮನಹಳ್ಳಿ ಜಂಕ್ಷನ್ ಮತ್ತು ಗಾರೇಭಾವಿಪಾಳ್ಯ ಜಂಕ್ಷನ್‌ಗಳ ಮಧ್ಯೆ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ಸ್ಥಳ ಒಂದು ಸಿಗ್ನಲ್‌ನಿಂದ ಮತ್ತೊಂದು ಸಿಗ್ನಲ್‌ಗೆ ಬಹಳ ಹತ್ತಿರವಿರುವುದರಿಂದ ಹಾಗೂ ಸಂಚಾರ ದಟ್ಟಣೆ ಹೆಚ್ಚಾಗುವ ಕಾರಣಗಳಿಂದಾಗಿ ಸಿಗ್ನಲ್ ಅಳವಡಿಕೆ ಮಾಡಿರುವುದಿಲ್ಲ.<br>➤ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ನಂತರ ಸಾರ್ವಜನಿಕರ ಸುಗಮ ಸಂಚಾರದ ಹಿತದೃಷ್ಟಿಯಿಂದ ಪ್ರತಿ ದಿನ ಎರಡು ಪಾಳಿಗಳಲ್ಲಿ ಸಂಚಾರ ನಿಯಂತ್ರಣ ಮತ್ತು ನಿರ್ವಹಣೆ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿರುತ್ತದೆ. |
| ಆ) | ಸಿಲ್ಕ್‌ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ಬಳಿಕ ಅಲ್ಲಿ ಟ್ರಾಫಿಕ್ ಸಿಬ್ಬಂದಿಯನ್ನು ನಿಯೋಜಿಸದೆ ಇರುವ ಕಾರಣಕ್ಕಾಗಿ ರಸ್ತೆ ಅಪಘಾತದಲ್ಲಿ ಸಾರ್ವಜನಿಕ ನೋರ್ವ ಪ್ರಾಣ ಕಳೆದುಕೊಳ್ಳಲು ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು; | ➤ ಸಿಲ್ಕ್‌ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ ಬಳಿಕ ಸದರಿ ಸ್ಥಳದಲ್ಲಿ ಸಾರ್ವಜನಿಕರ ಸುಗಮ ಸಂಚಾರದ ಹಿತದೃಷ್ಟಿಯಿಂದ ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br>➤ ಈ ಸ್ಥಳದಲ್ಲಿ ಉಂಟಾಗಿರುವ ಅಪಘಾತಕ್ಕೆ ಚಾಲಕನ ಅತೀ ವೇಗ ಮತ್ತು ನಿರ್ಲಕ್ಷ ಚಾಲನೆಯೇ ಕಾರಣವಾಗಿರುತ್ತದೆ. |
| ಇ) | ಅನಧಿಕೃತ ಅಕ್ರಮ ಮತ್ತು ಅವೈಜ್ಞಾನಿಕ ರಸ್ತೆ ತಿರುವಿನಿಂದಾಗಿ ಹಾಗೂ ಪೊಲೀಸ್ ಇಲಾಖೆಯ ಕರ್ತವ್ಯ ನಿರ್ಲಕ್ಷ್ಯದಿಂದಾಗಿ ದೇಶವ ಪ್ರಜೆಯೋರ್ವ ತನ್ನ ಪ್ರಾಣ ಕಳೆದುಕೊಳ್ಳುವಂತಾಗಿದ್ದು, ಈ ಅವಘಡಕ್ಕೆ ಕಾರಣರಾದ ಪೊಲೀಸ್ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ; | ➤ ರಸ್ತೆ ವಿಭಜಕಗಳನ್ನು ದಿನಾಂಕ:03.04.2019 ರಂದು ರಸ್ತೆ ಸುರಕ್ಷತಾ ಸಮಿತಿಯ **ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ** ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೆರವುಗೊಳಿಸಲಾಗಿರುತ್ತದೆ.<br>➤ ರಸ್ತೆ ವಿಭಜಕಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ತೆರವುಗೊಳಿಸಿರುವುದರಿಂದ ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವವಾಗುವುದಿಲ್ಲ.<br>➤ ಸದರಿ ಸ್ಥಳದಲ್ಲಿ ಜರುಗಿಸುವ ಅಪಘಾತದಲ್ಲಿ ಚಾಲಕನ ಅತೀ ವೇಗ ಮತ್ತು ನಿರ್ಲಕ್ಷ್ಯ ಚಾಲನೆ ಕಾರಣವಾಗಿದ್ದು, ಇದರಲ್ಲಿ ಪೊಲೀಸ್ ಅಧಿಕಾರಿಗಳ ನಿರ್ಲಕ್ಷ ಕಂಡುಬಂದಿರುವುದಿಲ್ಲ. |

| | | |
|---|---|---|
| ಈ) | ಖಾಸಗಿ ಬಿಲ್ಡರ್ ಓರ್ವರ ಲಾಭಕ್ಕಾಗಿ ಅವರ ಬಹುಮಹಡಿ ವಸತಿ ಸಂಕೀರ್ಣಕ್ಕೆ ಎದುರಾಗಿ ಉದ್ದೇಶಪೂರ್ವಕವಾಗಿ ಪಿಲ್ಲರ್ ಸಂಖ್ಯೆ 20 & 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಿದ್ದು, ಇದರಿಂದ ಸರ್ಕಾರಕ್ಕೆ ಆದ ಲಾಭವೇನು ; ಈ ಕುರಿತು ಸರ್ಕಾರದ ನಿಲುವೇನು ? | ➢ ರಸ್ತೆ ಸುರಕ್ಷತಾ ಸಮಿತಿಯ ಅಧಿಕಾರಿಗಳ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಪಿಲ್ಲರ್ ಸಂಖ್ಯೆ 4 ಮತ್ತು 5ರ ನಡುವೆ ಉಂಟಾಗುತ್ತಿದ್ದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಪಿಲ್ಲರ್ ಸಂಖ್ಯೆ 20 & 21ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸಲು ನಿರ್ಧರಿಸಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೆರವುಗೊಳಿಸಲಾಗಿರುತ್ತದೆ.<br>➢ ರಸ್ತೆ ವಿಭಜಕಗಳನ್ನು ಸಾರ್ವಜನಿಕ ಹಿತಾಸಕ್ತಿ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೆರವುಗೊಳಿಸಲಾಗಿರುತ್ತದೆ. |

ಹೆಚ್‌ಡಿ 681 ಎಸ್‌ಎಸ್‌ಟಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು